## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಾನಕೀರಾಮ.ಕೆ.ಓ., ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೂಡ್ಲಿಗಿ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ- ಆದೇಶ.

ಓದಲಾಗಿದೆ:- 1) ಪೊಲೀಸ್ ಇನ್ಸ್‌ಪೆಕ್ಟರ್, ಭ್ರಷ್ಟಾಚಾರ ನಿಗ್ರಹ ದಳ, ಬಳ್ಳಾರಿ ಇವರ ಪತ್ರ ಸಂಖ್ಯೆ:ಪಿಐ/ಎಸಿಬಿ/ಬಳ್ಳಾರಿ/ಸಿಆರ್-1/2016 ದಿ:11.08.2016.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂ.ಜಿಪಂಬ/ಆಡಳಿತ/ಸಿಸಿಎ/79/2016-17 ದಿ:24.08.2016.

-------

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ:-2ರಲ್ಲಿ ಓದಲಾದ ದಿನಾಂಕ 24.08.2016ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಗುಂಡುಮುಣುಗು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1)ಯಾದ ಶ್ರೀ ವೀರೇಶ, ಇವರು ಕೂಡ್ಲಿಗಿ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಜಾನಕೀರಾಮ್.ಕೆ.ಓ., ಮತ್ತು ಶ್ರೀ ಆರ್.ರಾಮನಾಥ್, ಗಣಕಯಂತ್ರ ನಿರ್ವಾಹಕರು (ಹೊರಗುತ್ತಿಗೆ), ತಾಲ್ಲೂಕು ಪಂಚಾಯತ್ ಕೂಡ್ಲಿಗಿ, ಇವರುಗಳ ವಿರುದ್ಧ ದಿನಾಂಕ: 10.08.2016ರಂದು ಭ್ರಷ್ಟಾಚಾರ ನಿಗ್ರಹದಳ, ಬಳ್ಳಾರಿ, ಇವರಿಗೆ ದೂರು ಸಲ್ಲಿಸಿದ್ದು, ಸದರಿ ದೂರಿನನ್ವಯ, ದಿನಾಂಕ: 10.08.2016ರಂದು ಕೂಡ್ಲಿಗಿ ತಾಲ್ಲೂಕಿನ ಗುಂಡುಮುಣುಗು ಗ್ರಾಮ ಪಂಚಾಯತಿಯ 14ನೇ ಹಣಕಾಸು ಯೋಜನೆಯಡಿ ನಿಗಧಿಪಡಿಸಿದ 2ನೇ ಕಂತಿನ ಸಾಮಾನ್ಯ ಮೂಲ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಕೂಡ್ಲಿಗಿ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಜಾನಕೀರಾಮ್, ಕೆ.ಓ., ಇವರು 15,000/-ಗಳ ಲಂಚದ ಹಣವನ್ನು ಮತ್ತು ಗಣಕಯಂತ್ರ ನಿರ್ವಾಹಕರಾದ ಶ್ರೀ ಆರ್.ರಾಮನಾಥ್ (ಹೊರಗುತ್ತಿಗೆ) ಇವರು ರೂ. 5,000/-ಗಳ ಲಂಚದ ಹಣವನ್ನು ಸ್ವೀಕರಿಸುತ್ತಿದ್ದಾಗ ಭ್ರಷ್ಟಾಚಾರ ನಿಗ್ರಹದಳ ಬಳ್ಳಾರಿ, ಇವರಿಂದ ಟ್ರ್ಯಾಪ್ ಆಗಿರುತ್ತಾರೆಂದು ತಿಳಿಸುತ್ತಾ, ಸದರಿ ಅಧಿಕಾರಿ/ನೌಕರರನ್ನು ದಸ್ತಗಿರಿ ಮಾಡಿ, ದಿನಾಂಕ: 10.08.2016ರಂದು ರಾತ್ರಿ 11.30ಕ್ಕೆ ಮಾನ್ಯ ವಿಶೇಷ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬಳ್ಳಾರಿ, ಇವರ ಮುಂದೆ ಹಾಜರುಪಡಿಸಲಾಗಿದ್ದು, ನ್ಯಾಯಾಲಯವು ಆಪಾದಿತರಿಗೆ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿದ ಬಗ್ಗೆ ಪೋಲಿಸ್ ಇನ್ಸ್‌ಪೆಕ್ಟರ್, ಭ್ರಷ್ಟಾಚಾರ ನಿಗ್ರಹದಳ, ಬಳ್ಳಾರಿ, ಇವರು ತಮ್ಮ ಕಚೇರಿಗೆ ವರದಿ ಮಾಡಿರುತ್ತಾರೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿರವರು ತಿಳಿಸುತ್ತಾ, ಸರ್ಕಾರದ ಸುತ್ತೋಲೆ ಸಂ: ಸಿಆಸುಇ 40 ಸೇಇವಿ 2014 ದಿನಾಂಕ: 20.10.2014ರ ಲೋಕಾಯುಕ್ತ ಸಂಸ್ಥೆಯವರಿಂದ ದಾಳಿಗೆ ಒಳಗಾದ ಸರ್ಕಾರಿ ನೌಕರರನ್ನು ಲೋಕಾಯುಕ್ತರು ಮಾಡುವ ಶಿಫಾರಸ್ಸಿನ ಮೇರೆಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ 10(1)(ಎಎ)ರನ್ವಯ ಅಮಾನತ್ತುಗೊಳಿಸುವಂತೆ ಬಳ್ಳಾರಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿ ಭ್ರಷ್ಟಾಚಾರ ನಿಗ್ರಹದಳ ಬಳ್ಳಾರಿ ಇವರಿಂದ ಟ್ರ್ಯಾಪ್ ಆದ ಸದರಿ ಅಧಿಕಾರಿ/ನೌಕರರುಗಳ ಪೈಕಿ ಶ್ರೀ ಜಾನಕೀರಾಮ್, ಇವರು ಇಲಾಖೆಯ ವೃಂದ–ಎ (ಕಿರಿಯ ಶ್ರೇಣಿ)ಗೆ ಸೇರಿದ ಅಧಿಕಾರಿಯಾಗಿರುತ್ತಾರೆ. ಮತ್ತೋರ್ವ ನೌಕರರಾದ ಶ್ರೀ ಆರ್.ರಾಮನಾಥ್, ಇವರು ಹೊರಗುತ್ತಿಗೆ ನೌಕರರಾಗಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, ನಿಯಮ–10(2)(ಎ)ರನ್ವಯ ಯಾವುದೇ ಸರ್ಕಾರಿ ನೌಕರರು 48 ಗಂಟೆಗಳಿಗೂ ಮೀರಿದ ಅವಧಿಯಲ್ಲಿ ನ್ಯಾಯಾಂಗ ಬಂಧನದಲ್ಲಿದ್ದರೆ ಅಂತಹ ಅಧಿಕಾರಿ/ನೌಕರರನ್ನು ನ್ಯಾಯಾಂಗ ಬಂಧನದಲ್ಲಿರಿಸಿದ ದಿನಾಂಕದಿಂದ ಅಮಾನತ್ತಿನಲ್ಲಿರಿಸಲಾಗಿದೆಯೆಂದು ಭಾವಿಸತಕ್ಕದ್ದೆಂದು (deemed suspension) ತಿಳಿಸಲಾಗಿದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಶ್ರೀ ಜಾನಕಿರಾಮ್.ಕೆ.ಓ., ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕೂಡ್ಲಿಗಿರವರು ಶ್ರೀ ವೀರೇಶ, ಕೂಡ್ಲಿಗಿ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಗುಂಡುಮುಣುಗು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್–1) ಇವರಿಂದ ಲಂಚದ ಹಣ ರೂ. 15,000/–ಗಳನ್ನು ಸ್ವೀಕರಿಸುತ್ತಿದ್ದಾಗ, ಭ್ರಷ್ಟಾಚಾರ ನಿಗ್ರಹದಳ ಬಳ್ಳಾರಿ ಇವರಿಂದ ಟ್ರ್ಯಾಪ್ ಆಗಿರುವ ಹಿನ್ನೆಲೆಯಲ್ಲಿ ಶ್ರೀ ಜಾನಕಿರಾಮ್ ಕೆ.ಓ. ಇವರನ್ನು ದಿನಾಂಕ:10.08.2016ರಿಂದ ನ್ಯಾಯಾಂಗ ಬಂಧನದಲ್ಲಿರಿಸಿರುವುದರಿಂದ ಸದರಿ ಅಧಿಕಾರಿಯು ತಮ್ಮ ಕಾರ್ಯನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ತೀವ್ರ ತರವಾದ ಕರ್ತವ್ಯಲೋಪವೆಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ 10(1)(ಎ)ರನ್ವಯ ಅಮಾನತ್ತುಗೊಳಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 159 ವಿಸೇಬಿ 2016 ಬೆಂಗಳೂರು ದಿನಾಂಕ: 17.09.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಜಾನಕಿರಾಮ್.ಕೆ.ಓ. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೂಡ್ಲಿಗಿ ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹದಳ ಬಳ್ಳಾರಿ, ಇಲ್ಲಿನ ಕಚೇರಿಯಲ್ಲಿ ದಾಖಲಾಗಿರುವ ಕ್ರಿಮಿನಲ್ ಮೊಕದ್ದಮೆಗೆ ಸಂಬಂಧಿಸಿದಂತೆ ಭ್ರಷ್ಟಾಚಾರ ನಿಗ್ರಹದಳವು ಕೈಗೊಳ್ಳುವ ಕ್ರಮವನ್ನು ಬಾಕಿಯಿರಿಸಿ, ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 10(1)(ಎ)ರನ್ವಯ ಸರ್ಕಾರವು ದಿನಾಂಕ:10.08.2016ರಿಂದಲೇ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಮೇಲ್ಕಂಡ ಅಧಿಕಾರಿಯ ಹುದ್ದೆಯ ಸ್ಥಾನ (ಲೀನ್)ವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಕಚೇರಿಗೆ ವರ್ಗಾಯಿಸಿದೆ.

ಅಮಾನತ್ತಿನ ಅವಧಿಯಲ್ಲಿ ಮೇಲ್ಕಂಡ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 98ರನುಸಾರ ಜೀವನಾಧಾರ ಭತ್ಯೆಗೆ ಅವರು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/9/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:-

1. ಮಹಾಲೇಖಪಾಲರು (ಲೆಕ್ಕಪತ್ರ-1 & 2/ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ.
3. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರ ಮುಖಾಂತರ)

ಪ್ರತಿಯನ್ನು:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
3) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.